ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು–560065

## * ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 25.08.2023

## ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

### ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

### (ದಿನಾಂಕ 26–08–2023 ರಿಂದ 30–08–2023 ವರೆಗೆ)

| ನಿಯತಾಂಕಗಳು | 26.08.2023 | 27.08.2023 | 28.08.2023 | 29.08.2023 | 30.08.2023 |
|---|---|---|---|---|---|
| ಮಳೆ (ಮಿ ಮಿ) | 0 | 1 | 1 | 1 | 1 |
| ಗರಿಷ್ಠ ಉಷ್ಣಾಂಶ (ಡಿ.ಸೆ.) | 32 | 31 | 31 | 31 | 31 |
| ಕನಿಷ್ಠ ಉಷ್ಣಾಂಶ (ಡಿ.ಸೆ.) | 20 | 20 | 20 | 20 | 20 |
| ಮೋಡ (ಪ್ರಮಾಣ) | 5 | 5 | 5 | 5 | 5 |
| ಆರ್ದ್ರತೆ 7.20 ಬೆ (ಶೇ) | 79 | 79 | 79 | 79 | 79 |
| ಆರ್ದ್ರತೆ 2.20 ಮ (ಶೇ) | 71 | 71 | 71 | 71 | 71 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 5 | 6 | 7 | 8 | 8 |
| ಗಾಳಿಯ ದಿಕ್ಕು (ಡಿಗ್ರಿ) | 288 | 291 | 292 | 291 | 292 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ 31.0–32.0$^{o}$ C ಮತ್ತು ಕನಿಷ್ಠ 20.0$^{o}$ C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **79** % ಇದ್ದು ಮಧ್ಯಾಹ್ನ **71** % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **5–8** ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

**"ಮಗೆ ಮಳೆ ಹುಯ್ದರೆ, ಬೆಳೆಯೆಲ್ಲಾ ಸಮೃದ್ಧ !"**

- ಮಗೆ ನಕ್ಷತ್ರದ ಮಳೆಯ ಕಾಲವು ಆಗಷ್ಟ್ ತಿಂಗಳ 17 ರಿಂದ ಆಗಷ್ಟ್ 30 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 62.8 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ | | ➢ ಕಳೆದ ತಿಂಗಳಿನಿಂದ ಕಡಿಮೆ ಮಳೆಯಿಂದ ಮಣ್ಣಿನಲ್ಲಿ ತೇವಾಂಶದ ಕೊರತೆಯಿದ್ದು ಬೆಳೆಗಳಿಗೆ ರಕ್ಷಣಾತ್ಮಕ ನೀರಾವರಿಯನ್ನು ಕೃಷಿ ಹೊಂಡದಲ್ಲಿ ಶೇಖರಿಸಿರುವ ಮಳೆ ನೀರನ್ನು ಬೆಳೆಗಳಿಗೆ ಕೊಡಿ.<br>➢ ಕಳೆದ ತಿಂಗಳಿನಿಂದ ಕಡಿಮೆ ಮಳೆಯಿಂದ ಮಣ್ಣಿನಲ್ಲಿ ತೇವಾಂಶದ ಕೊರತೆಯಿದ್ದು ನಿರ್ವಹಣೆಗಾಗಿ ಮುಂಗಾರು ಬೆಳೆಗಳಿಗೆ ಅಂತರ ಬೇಸಾಯ ಮಾಡಿ, ಬುಡಕ್ಕೆ ಮಣ್ಣನ್ನು ಸೇರಿಸಿ ಇದರಿಂದ ತೇವಾಂಶ ಸಂರಕ್ಷ ಣೆಯಾಗುತ್ತದೆ.<br>➢ ಗೊಬ್ಬರದ ಗಿಡಗಳನ್ನು ಮತ್ತು ಕಳೆಗಿಡಗಳನ್ನು ಭೂ ಹೊದಿಕೆಯಾಗಿ ಬೆಳೆಗಳಿಕೆ ಹಾಕಿ ಇದರಿಂದ ಗೊಬ್ಬರ ಮತ್ತು ತೇವಾಂಶದ ಸಂರಕ್ಷ ಣೆಯಾಗುತ್ತದೆ. |
| ಮುಂಗಾರು ಬೆಳೆಗಳು | ಬಿತ್ತನೆ ಮತ್ತು ಮೊಳಕೆ, ಬೆಳವಣಿಗೆ ಹಂತ ಮತ್ತು ಹೂವಿನ ಹಂತ | **ಈ ಕೆಳಗಿನ, ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>**ರಾಗಿ** : ಜಿ.ಪಿ.ಯು–26,28 ಮತ್ತು 66, ಹೆಚ್.ಆರ್–911, ಎಂ.ಎಲ್–365, ಕೆ.ಎಂ.ಆರ್–204<br>**ಅಲಸಂದೆ** : ಟಿ.ವಿ.ಎಕ್ಸ್–944, ಕೆ.ಬಿ.ಸಿ–1<br>**ಹೆಸರು** :ಪಿ.ಎಸ್–16, ಪಿ.ಡಿ.ಎಮ್–84, 178 , **ಉದ್ದು:** ಕರಗಾವ್–3, ಟಿ–9, ರಶ್ಮಿ<br>➢ ತೊಗರಿ, ಹರಳು ಬಿತ್ತನೆಯಾಗಿದ್ದಲ್ಲಿ ಸಾಲುಗಳ ಮಧ್ಯದಲ್ಲಿರುವ ಮಣ್ಣನ್ನು ಗಿಡದ ಬುಡಕ್ಕೆ ಹಾಕುವುದರಿಂದ ಭೂಮಿಯು ದಿಂಡು ಸಾಲಾಗಿ ಪರಿವರ್ತನೆಯಾಗುತ್ತದೆ ಇದರಿಂದ ಗಿಡಗಳಿಗೆ ಹೆಚ್ಚು ಸಿಗುವಂತಾಗಿ ಒಣಹವೆಯ ಅನಾನುಕೂಲತೆಯನ್ನು ಮುಂದೂಡಬಹುದು.<br>➢ ಶೇಂಗಾ ಬೆಳೆಯಲ್ಲಿ ಹೂವಿನ ಹಂತದಲ್ಲಿ ಶಿಫಾರಿಸ್ಸಿದ ಜಿಪ್ಸಂ ಅನ್ನು ಬೆಳೆಗಳಿಗೆ ಕೊಡಿ. |
| ಮಾವು | | ಕಳೆ ನಿರ್ವಹಣೆಗೆ ಮತ್ತು ಭೂಮಿಯಲ್ಲಿನ ತೇವಾಂಶವನ್ನು ಸಂರಕ್ಷಿಸಲು ಅಂತರ ಬೇಸಾಯ ಮಾಡಬೇಕು. |
| ಪಶುಸಂಗೋಪನೆ | | ➢ **ನೆರಡಿ ರೋಗ:** ಜ್ವರ, ಕೆಲವೊಮ್ಮೆ ಇದ್ದಕ್ಕಿದ್ದ ಹಾಗೆ ದನಗಳು ಸಾಯುವುದು, ಮೇವು ಬಿಡುವುದು, ಹೆಚ್ಚು ನಾಡಿ ಬಡಿತ, ಉಸಿರಾಟ, ಸಾವಿನ ಸಮಯದಲ್ಲಿ ಮೂಗು, ಬಾಯಿ ಮತ್ತು |

| | |
|---|---|
| | ಗುದದ್ವಾರದಿಂದ ರಕ್ತಸ್ರಾವವಾಗುತ್ತದೆ. ಇದರ ಹತೋಟಿಗೆ ಪ್ರತಿ ವರ್ಷ **ಜುಲೈ/ಆಗಸ್ಟ್** ತಿಂಗಳಲ್ಲಿ ಈ ರೋಗದ ಲಸಿಕೆಯನ್ನು ಕೊಡಿಸಿ ತಡೆಗಟ್ಟಬಹುದು.<br>➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಸೂಕ್ತವಾದ ಹವಾಮಾನ ಮತ್ತು ಯತೇಚ್ಚ ಮೇವು ಸಿಗುವುದರಿಂದ ಹೈನುಗಾರಿಕೆ, ಹಂದಿ ಸಾಕಾಣಿಕೆ, ಕುರಿ ಮತ್ತು ಮೇಕೆ ಸಾಕಾಣಿಕೆಗೆ ಅನುವು ಮಾಡಿಕೊಡುತ್ತದೆ.<br>➢ ಹೈನುಗಾರಿಕೆಯಲ್ಲಿ ರೋಗಗಳ ನಿಯಂತ್ರಣಕ್ಕೆ ಪ್ರತಿ ವರ್ಷ ಲಸಿಕೆಯನ್ನು ಮಾಡಿಸುವುದು ಉತ್ತಮ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |

**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಫ್:**

- ➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.